# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 272 (2035+2046)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಪಶುಸಂಗೋಪನೆ ಸಚಿವರು

ವಿಷಯ : ಕರ್ನಾಟಕ ಪಶು ವೈದ್ಯಕೀಯ ಹಾಗೂ ಮೀನುಗಾರಿಕೆ ವಿಶ್ವವಿದ್ಯಾಲಯಗಳ ಕುರಿತು

(ಅ) ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್ ಇಲ್ಲಿನ ಕುಲಪತಿಗಳು ಹಾಗೂ ಇತರೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿಗಳ ದುರುಪಯೋಗ ಮಾಡಿರುವ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯದ ಹಗರಣದ ಬಗ್ಗೆ ಇಲಾಖೆ ಕಾರ್ಯದರ್ಶಿಗಳು ತನಿಖೆ ಮಾಡಲು ಸರ್ಕಾರಕ್ಕೆ ಈಗಾಗಲೇ ಶಿಫಾರಸ್ಸು ಮಾಡಿರುವುದು ನಿಜವೇ;

(ಇ) ಸರ್ಕಾರವು ಯಾವ ಕಾಲಮಿತಿಯೊಳಗೆ ಈ ಹಗರಣದ ಬಗ್ಗೆ ತನಿಖೆ ಮಾಡಲು ಆದೇಶ ಹೊರಡಿಸುವುದು;

(ಈ) 2017-18 ಹಾಗೂ 2018-19ರ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನಾ ವರದಿಯ ಅನ್ವಯ ಕುಲಪತಿಗಳು ವಿವಿಧ ಬಾಬ್ತುಗಳಿಗೆ ಕಾನೂನು ಬಾಹಿರವಾಗಿ ಖರ್ಚು ಮಾಡಿರುವ ಹಣಕ್ಕೆ ಸರ್ಕಾರ ಆಕ್ಷೇಪಣೆ ವ್ಯಕ್ತಪಡಿಸಿರುವ ಮೊತ್ತವೆಷ್ಟು ಹಾಗೂ ಕಡ್ಡಾಯವಾಗಿ ವಸೂಲಿ ಮಾಡಲು ಸೂಚಿಸಿರುವ ಮೊತ್ತ ಎಷ್ಟು; ವಸೂಲಿಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಉ) ಮೀನುಗಾರಿಕೆ ಕಾಲೇಜಿನಲ್ಲಿ AICRP ಯೋಜನೆಯಡಿ ಆರ್ಥಿಕ ಇಲಾಖೆ ಒಪ್ಪಿಗೆ ಪಡೆಯದೆ ತಾತ್ಕಾಲಿಕ ಸಿಬ್ಬಂದಿಗಳಿಗೆ Consolidated Pay ನೀಡಬೇಕಾಗಿದ್ದು, ಆದರೆ ಇವರುಗಳಿಗೆ ವೇತನ ಹಾಗೂ ಇತರೆ ಭತ್ಯೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ; (ದಾಖಲೆಗಳೊಂದಿಗೆ ವಿವರವಾದ ಮಾಹಿತಿ ನೀಡುವುದು) AICRP ಯೋಜನೆಗೆ ಸಂಬಂಧಪಟ್ಟಂತೆ ಖಾಸಗಿ ಮತ್ತು ಸರ್ಕಾರದ ನಡುವಿನ ಒಪ್ಪಂದ/ಒಡಂಬಡಿಕೆ ಏರ್ಪಟ್ಟಿದೆಯೇ; (MOUಪ್ರತಿಯನ್ನು ಒದಗಿಸುವುದು)

(ಊ) ಅಕ್ರಮ ಬೆಳಕಿಗೆ ಬಂದ ನಂತರವು ಸದರಿ ಯೋಜನೆಯನ್ನು ಮುಕ್ತಾಯಗೊಳಿಸಲು ಪತ್ರ ಬರೆದಿರುವುದು ನಿಜವೇ; ಇಲ್ಲಿಯವರೆಗೆ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುವುದು?